ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಸ್ಚಿವಾಲ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ    ದಿನಾಂಕ : DATE : 25/12/20

---

## ಸಣ್ ಸುದ್ದಿ

# ಹೊಸರೂಪದ ಕೊರೋನಾ: ಎಚ್ಚರಿಕೆ ವಹಿಸಲು ರಮೇಶ್ ಸಲಹೆ



ಬೆಳಗಾವಿ: ಬ್ರಿಟನ್ ದೇಶದಲ್ಲಿ ಹೊಸ ರೂಪದ ಕೊರೋನಾ ವೈರಸ್ ಕಂಡುಬಂದಿರುವ ಹಿನ್ನೆಲೆಯಲ್ಲಿ ಎಲ್ಲರೂ ಎಚ್ಚರಿಕೆಯಿಂದ ಇರಬೇಕು ಎಂದು ಜಲಸಂಪನ್ಮೂಲ ಸಚಿವ ರಮೇಶ್ ಜಾರಕಿಹೊಳಿ ಅವರು ಸಾರ್ವಜನಿಕರಿಗೆ ಪ್ರಕಟಣೆಯಲ್ಲಿ ಸಲಹೆ ನೀಡಿದ್ದಾರೆ. ವ್ಯಕ್ತಿಗತ ಸಾಮಾಜಿಕ ಅಂತರವನ್ನು ಸದಾ ಕಾಪಾಡಿಕೊಳ್ಳಬೇಕು. ಕಡ್ಡಾಯವಾಗಿ ಮಾಸ್ಕ್ ಮತ್ತು ಸ್ಯಾನಿಟೈಸರ್ ಬಳಸಬೇಕು. ಆದಷ್ಟು ಜಾಗರೂಕತೆಯಿಂದ ಜೀವನ ನಿರ್ವಹಣೆ ಮಾಡಬೇಕು ಎಂದು ಕರೆ ನೀಡಿದ್ದಾರೆ. ಕೋವಿಡ್-19 ಸೋಂಕು ನಿವಾರಕ ಲಸಿಕೆಯು ಶೀಘ್ರದಲ್ಲೇ ಮಾರುಕಟ್ಟೆಗೆ ಬರಲಿದೆ. ಲಸಿಕೆಯನ್ನು ಕೂಡ ವ್ಯವಸ್ಥಿತವಾಗಿ ಜನರಿಗೆ ತಲುಪಿಸುವ ವ್ಯವಸ್ಥೆಯನ್ನು ಸರ್ಕಾರ ಮಾಡುತ್ತಿದೆ. ಅಲ್ಲಿಯವರೆಗೂ ಜನರು ಮೈಮರೆಯದೇ ಸರ್ಕಾರದ ಮಾರ್ಗಸೂಚಿಗಳನ್ನು ಪಾಲಿಸಲೇಬೇಕು. ಮಾರುಕಟ್ಟೆಗಳಲ್ಲಿ ಸೋಂಕು ಹರಡುವಿಕೆ ತಡೆಗೆ ವ್ಯವಸ್ಥಿತ ಮುನ್ನೆಚ್ಚರಿಕೆ ವಹಿಸಿಕೊಳ್ಳಬೇಕು. ಜ.1ರಿಂದ ಶಾಲಾ ಕಾಲೇಜುಗಳು ಪ್ರಾರಂಭವಾಗಲಿದ್ದು, ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಸುರಕ್ಷತಾ ಕ್ರಮಗಳನ್ನು ತೆಗೆದುಕೊಳ್ಳಬೇಕು ಎಂದಿದ್ದಾರೆ.